# ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2349(2788)
ಸದಸ್ಯರ ಹೆಸರು : ಶ್ರೀ ಎಸ್.ವ್ಹಿ ಸಂಕನೂರ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 28-03-2022
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

| ಕ್ರಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಸರ್ಕಾರಿ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ 2000ರಲ್ಲಿ ಪ್ರೌಢಶಾಲಾ ವಿಭಾಗದ ಡಿ ದರ್ಜೆಯ ಹುದ್ದೆಗಳನ್ನು ರದ್ದುಪಡಿಸಿ ಏಜೆನ್ಸಿ ಮೂಲಕ ತುಂಬಿಕೊಳ್ಳಲು ಸರ್ಕಾರವು ಆದೇಶ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅಧಿಸೂಚನೆ ಸಂಖ್ಯೆ: ಇಡಿ 08 ಎಸ್.ಇ.ಪಿ.2015, ದಿನಾಂಕ:26.09.2017ರನ್ವಯ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಮತ್ತು ಅಧಿಸೂಚನೆ ಸಂಖ್ಯೆ:ಇಡಿ 119 ಟಿಪಿಯು 2015, ದಿನಾಂಕ:09.11.2017ರನ್ವಯ ಖಾಸಗಿ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿನ ಗ್ರೂಪ್ ಡಿ ಹುದ್ದೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ನಿಯಮಗಳನ್ನು ರಚಿಸಲಾಗಿದೆ. |
| (ಆ) | ಹೊರಡಿಸಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ರಾಜ್ಯದ ಖಾಸಗಿ ಅನುದಾನಿತ ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ಏಜೆನ್ಸಿ ಮೂಲಕ ಡಿ ದರ್ಜೆಯ ಹುದ್ದೆಗಳನ್ನು ತುಂಬಲು ಅನುಮತಿ ನೀಡಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು) | ಖಾಸಗಿ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಗ್ರೂಪ್ ಡಿ ಹುದ್ದೆಯನ್ನು ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ. ಆದುದರಿಂದ, ಗ್ರೂಪ್ ಡಿ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ತುಂಬಲು ಅನುಮತಿ ನೀಡಲಾಗಿರುವುದಿಲ್ಲ. |
| (ಇ) | ಏಜೆನ್ಸಿ ಮೂಲಕ ಭರ್ತಿಮಾಡಿಕೊಂಡಿರುವ ಡಿ ದರ್ಜೆಯ ಹುದ್ದೆಯ ಸಿಬ್ಬಂದಿಗೆ ಎಷ್ಟು ವೇತನವನ್ನು ನಿಗದಿಪಡಿಸಲಾಗಿದೆ; | ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ಕೋರಿ ಪ್ರಸ್ತಾವನೆ ಬಾರದ ಕಾರಣ ವೇತನವನ್ನು ನಿಗಧಿಪಡಿಸಿರುವುದಿಲ್ಲ. |
| (ಈ) | ಈ ರೀತಿ ನಿಗಧಿಪಡಿಸಿದ ಸಂಬಳವನ್ನು ಸರ್ಕಾರದಿಂದ ನೀಡಲಾಗುತ್ತಿದೆಯೇ? (ಸಂಪೂರ್ಣ ಮಾಹಿತಿಯನ್ನು ನೀಡುವುದು) | ಸಹಾಯಾನುದಾನಕ್ಕೊಳಪಟ್ಟ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಒಂದು ಗ್ರೂಪ್ ಡಿ ಹುದ್ದೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆದುಕೊಳ್ಳಲು ನಿಯಮಗಳಲ್ಲಿ ಅವಕಾಶವಿದ್ದು, ಸದರಿ ಹುದ್ದೆಗೆ ಸರ್ಕಾರದಿಂದ ಸಹಾಯಾನುದಾನವನ್ನು ಬಿಡುಗಡೆ ಮಾಡಲು ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿದೆ. |

ಸಂಖ್ಯೆ: ಇಪಿ 134 ಎಸ್‌ಇಎಸ್ 2022

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು